





ಮೈಸೂರು-ಕೊಡಗು ಬಿಜೆಪಿ ಅಭ್ಯರ್ಥಿ ಯದುವೀರ ಅವರು ಕುಟುಂಬ ಸಮೇತರಾಗಿ ಮತ ಚಲಾಯಿಸಿದರು.



ಸಂಸದೆ ಸುಮಲತಾ ಅವರು ಮಂಡ್ಯದಲ್ಲಿ ತಮ್ಮ ಬೆಂಬಲಿಗರೊಂದಿಗೆ ಮತಗಟ್ಟೆಗೆ ಬಂದು ಹಕ್ಕು ಚಲಾಯಿಸಿದರು.



ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿ ಹಾಗೂ ಅನಿತಾ ಕುಮಾರಸ್ವಾಮಿ ಮತದಾನ ಚಲಾಯಿಸಿದರು.



ಬೆಂಗಳೂರು ಗ್ರಾಮಾಂತರ ಬಿಜೆಪಿ ಅಭ್ಯರ್ಥಿ ಡಾ.ಸಿ.ಎನ್ ಮಂಜುನಾಥ್ ದಂಪತಿ ಮತದಾನ ಮಾಡಿದರು.



ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರು ದಂಪತಿ ಸಮೇತರಾಗಿ ಮತ ಚಲಾಯಿಸಿದರು.

## ಸಮಾಚಾರ ಸಣ್ಣದಲ್ಲ

### ಶಿವಮೊಗ್ಗಕ್ಕೆ ರಾಹುಲ್ ಗಾಂಧಿ ಮೇ 2ರಂದು

**ಶಿವಮೊಗ್ಗ:** ರಾಹುಲ್ ಗಾಂಧಿ ಮೇ 2ರಂದು ಶಿವಮೊಗ್ಗಕ್ಕೆ ಭೇಟಿ ನೀಡಲಿದ್ದಾರೆ ಎಂದು ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿ, ರಾಹುಲ್ ಗಾಂಧಿ 12 ಗಂಟೆಯಿಂದ 1:30ರ ತನಕ ಸಮಯ ಕೊಟ್ಟಿದ್ದಾರೆ. ನಗರದ ಫ್ರೀಡಂಪಾರ್ಕ್‌ನಲ್ಲಿ ದೊಡ್ಡಮಟ್ಟದಲ್ಲಿ ಸಮಾವೇಶ ಮಾಡಬೇಕೆಂದು ತೀರ್ಮಾನಿಸಿದ್ದೇವೆ. ಅಂದು ಶಿವಮೊಗ್ಗ ನಗರ, ಗ್ರಾಮಾಂತರ, ಶಿಕಾರಿಪುರ ಮತ್ತು ಭದ್ರಾವತಿಯ ಜನ ಹೆಚ್ಚಿನ ಸಂಖ್ಯೆಯಲ್ಲಿ ಸಮಾವೇಶದಲ್ಲಿ ಸೇರಲಿದ್ದಾರೆ ಎಂದರು. ಫಿಲ್ಮ್ ಚೇಂಬರ್ ಪಕ್ಷಾತೀತವಾಗಿ ಗೀತಾ ಶಿವರಾಜ್ ಕುಮಾರ ಅವರಿಗೆ ಬೆಂಬಲ ಘೋಷಿಸಿದೆ. ಅವರು ಕೂಡ ಮೇ 29ರಿಂದ ಎರಡು ದಿನ ಕ್ಷೇತ್ರದಲ್ಲಿ ಪ್ರಚಾರ ಮಾಡಲಿದ್ದಾರೆ. ಪಕ್ಷಾತೀತವಾಗಿ ಗೀತಾ ಶಿವರಾಜ್‌ಕುಮಾರ್ ಅವರನ್ನು ಬೆಂಬಲಿಸುವುದಾಗಿ ಕೆಲವು ಫಿಲ್ಮ್ ಸ್ಟಾರ್‌ಗಳು ಹೇಳಿದ್ದಾರೆ ಎಂದು ಮಾಹಿತಿ ನೀಡಿದರು.



### ಪ್ರಜಾಪ್ರಭುತ್ವದಲ್ಲಿ ಪ್ರಜೆಗಳೇ ರಾಜರು

**ಉಡುಪಿ:** ನಮಗೆ ಬೇಕಾಗಿರುವ ಸರಕಾರ ರೂಪಿಸುವ ದೊಡ್ಡ ಬದ್ಧತೆ ಪ್ರಜೆಗಳ ಮೇಲೆ ಇದೆ. ಎಲ್ಲ ಪ್ರಜೆಗಳು ಅವಶ್ಯವಾಗಿ ಮತದಾನ ಮಾಡಬೇಕು. ಯಾರೂ ಕೂಡ ಮತದಾನದಿಂದ ದೂರ ಉಳಿಯಬಾರದು ಎಂದು ಪೇಜಾವರ ಮಠದ ಶ್ರೀ ವಿಶ್ವಪ್ರಸನ್ನ ತೀರ್ಥ ಸ್ವಾಮೀಜಿ ಹೇಳಿದರು. ನಗರದ ಮತಗಟ್ಟೆ ಸಂಖ್ಯೆ 185 ರಲ್ಲಿ ಮತದಾನ ಮಾಡಿದ ಬಳಿಕ ಮಾತನಾಡಿದ ಅವರು, ಮತದಾನ ಮಾಡಿ ತುಂಬಾ ಹೆಮ್ಮೆ ಅನಿಸುತ್ತಿದೆ. ರಾಮ ದೇವರ ಪ್ರಾಣ ಪ್ರತಿಷ್ಠೆ ಮಾಡಿದಾಗ ಅನುಭವಿಸಿದ ಧನ್ಯತಾ ಭಾವ ಈಗಲೂ ಅನುಭವಿಸಿದ್ದೇವೆ. ದೇಶದಲ್ಲಿ ಎಲ್ಲ ಬಗೆಯ ಜನ ಎಲ್ಲ ಕಾಲಕ್ಕೂ ಇರುತ್ತಾರೆ. ನೆಲದ ಸಂಸ್ಕೃತಿಯನ್ನು ಗೌರವಿಸುವ ಸರ ಕಾರವನ್ನು ರೂಪಿಸುವ ಅವಕಾಶ ನಮಗೆ ಇದೆ. ಸಮಾ ಜದ ಪ್ರಸಕ್ತ ವಾತಾವರಣವನ್ನು ಅರ್ಥ ಮಾಡಿಕೊಂಡು ಮತದಾನ ಮಾಡಬೇಕು. ರಾಜನಾದವ ಸರಿಯಾಗಿದ್ದರೆ ಕಾಲ ಯಾವತ್ತೂ ಹಾಳಾಗುವುದಿಲ್ಲ. ಈಗ ಪ್ರಜೆಗಳೇ ರಾಜರು ಎಂದರು.



### ಅನಾರೋಗ್ಯ: ಮತಗಟ್ಟೆ ಸಿಬ್ಬಂದಿಯೊಬ್ಬರು ಸಾವು

**ಚಿತ್ರದುರ್ಗ:** ಚಳ್ಳಕೆರೆ ತಾಲೂಕಿನ ಹೊಟ್ಟೆಪ್ಪನಹಳ್ಳಿಯ ಮತಗಟ್ಟೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಎಪಿಆರ್‌ಒ ಮೃತಪಟ್ಟಿದ್ದಾರೆ. ಚಳ್ಳಕೆರೆ ಪಟ್ಟಣದ ವಿಠಲ ನಗರದ ಯಶೋಧಮ್ಮ (55) ಮೃತ ದುರ್ದೈವಿ. ಮೃತ ಮಹಿಳೆ ಲೋಕಸಭಾ ಚುನಾವಣೆ ಹಿನ್ನೆಲೆ ಹೊಟ್ಟೆಪ್ಪನಹಳ್ಳಿ ಮತಗಟ್ಟೆ ಸಂಖ್ಯೆ 202ರಲ್ಲಿ ಕಾರ್ಯನಿರ್ವಹಿಸುತ್ತಿದ್ದರು. ಲೋ ಬಿಪಿಯಿಂದಾಗಿ ಅಸ್ವಸ್ಥಗೊಂಡಿದ್ದ ಅವರನ್ನು ಚಳ್ಳಕೆರೆ ಆಸ್ಪತ್ರೆಗೆ ಕರೆತರಲಾಗುತ್ತಿತ್ತು. ಆದರೆ, ಅಷ್ಟರಲ್ಲಿ ಯಶೋಧಮ್ಮ ಕೊನೆಯುಸಿರೆಳೆದಿದ್ದಾರೆ. ಸುದ್ದಿ ತಿಳಿದು ಚಳ್ಳಕೆರೆ ಆಸ್ಪತ್ರೆಗೆ ಅಪರ ಜಿಲ್ಲಾಧಿಕಾರಿ ಕುಮಾರಸ್ವಾಮಿ ಭೇಟಿ ನೀಡಿ ಪರಿಶೀಲಿಸಿದರು. ಚಳ್ಳಕೆರೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಈ ಪ್ರಕರಣ ನಡೆದಿದೆ.

### ಮತದಾನ ಬಹಿಷ್ಕಾರ, ಮತಗಟ್ಟೆಯೇ ಧ್ವಂಸ

**ಚಾಮರಾಜನಗರ:** ಮತದಾನ ಬಹಿಷ್ಕಾರ ಮಾಡಿದ್ದ ಗ್ರಾಮಸ್ಥರು ಮತಗಟ್ಟೆಯನ್ನೇ ಧ್ವಂಸ ಮಾಡಿರುವ ಘಟನೆ ಹನೂರು ತಾಲೂಕಿನ ಮಲೆಮಹದೇಶ್ವರ ಬೆಟ್ಟ ಗ್ರಾಮ ಪಂಚಾಯತಿ ವ್ಯಾಪ್ತಿಯ ಇಂಡಿಗನತ್ತ ಗ್ರಾಮದಲ್ಲಿ ನಡೆದಿದೆ.ಹನೂರು ತಾಲೂಕಿನ ಇಂಡಿಗನತ್ತ ಗ್ರಾಮದಲ್ಲಿ ಉದ್ರಿಕ್ತ ಮತದಾರರು ಮತಗಟ್ಟೆಯ ಬಾಗಿಲು, ಮೇಜು- ಕುರ್ಚಿ, ಇವಿಎಂ ಯಂತ್ರ ಇತರೆ ಪರಿಕರಗಳನ್ನು ಧ್ವಂಸ ಮಾಡಿ ಬೆಂಕಿ ಹಚ್ಚುವ ಯತ್ನ ಮಾಡಿದ್ದಾರೆ. ಇನ್ನು, ಘಟನೆಯಲ್ಲಿ ಪೊಲೀಸರು, ಚುನಾವಣಾ ಅಧಿಕಾರಿಗಳು ಕೂಡ ಸಣ್ಣಪುಟ್ಟ ಗಾಯಗಳಾಗಿವೆ.

ಗ್ಯಾರಂಟಿಗಳ ಲಾಭ ಪಡೆಯುವ ಹುಮ್ಮಸ್ಸಿನಲ್ಲಿ ಸಂಯುಕ್ತಾ | ಮತ್ತೊಮ್ಮೆ ಮೋದಿ ಮೇಲೆ ಭರವಸೆ ಇಟ್ಟ ಗದ್ದಿಗೌಡರ

# ಗದ್ದಿಗೌಡರ ಗೆಲುವಿಗೆ ಬ್ರೇಕ್ ಹಾಕುವುದೇ ಕಾಂಗ್ರೆಸ್?







**ಜಾತಿ ಲೆಕ್ಕಾಚಾರ**

ಲಿಂಗಾಯತರು-5,65,000
ಎಸ್‌ಸಿ-2,70,000
ಎಸ್‌ಟಿ-1,20,000
ಕುರುಬ-2,50,000
ಮುಸ್ಲಿಂ-1,70,000
ನೇಕಾರರು-58,000
ಇತರೆ-6,00,000

**ಶಾಸಕರ ಬಲಾಬಲ**

| ಕ್ಷೇತ್ರ | ಶಾಸಕರು | ಪಕ್ಷ |
|---|---|---|
| ಜಮಖಂಡಿ | ಜಗದೀಶ ಗುಡಗುಂಟಿ | ಬಿಜೆಪಿ |
| ತೇರದಾಳ | ಸಿದ್ದು ಸವದಿ | ಬಿಜೆಪಿ |
| ಮುಧೋಳ | ಆರ್.ಬಿ.ತಿಮ್ಮಾಪುರ | ಕಾಂಗ್ರೆಸ್ |
| ಬೀಳಗಿ | ಜೆ.ಟಿ.ಪಾಟೀಲ | ಕಾಂಗ್ರೆಸ್ |
| ಬಾಗಲಕೋಟೆ | ಎಚ್.ವೈ.ಮೇಟಿ | ಕಾಂಗ್ರೆಸ್ |
| ಬಾದಾಮಿ | ಭೀಮಸೇನ ಚಿಮ್ಮನಕಟ್ಟಿ | ಕಾಂಗ್ರೆಸ್ |
| ಹುನಗುಂದ | ವಿಜಯಾನಂದ ಕಾಶಪ್ಪನವರ | ಕಾಂಗ್ರೆಸ್ |
| ನರಗುಂದ | ಸಿ.ಸಿ.ಪಾಟೀಲ | ಬಿಜೆಪಿ |

**ಕಳೆದ ಮೂರು ಚುನಾವಣೆಗಳ ಫಲಿತಾಂಶ**

| ವರ್ಷ | ಗೆದ್ದವರು | ಸೋತವರು | ಗೆಲುವಿನ ಅಂತರ |
|---|---|---|---|
| 2009 | ಪಿ.ಸಿ.ಗದ್ದಿಗೌಡರ(ಬಿಜೆಪಿ) | ಜೆ.ಟಿ.ಪಾಟೀಲ(ಕಾಂಗ್ರೆಸ್) | 35,446 |
| 2014 | ಪಿ.ಸಿ.ಗದ್ದಿಗೌಡರ(ಬಿಜೆಪಿ) | ಅಜಯಕುಮಾರ ಸರನಾಯಕ (ಕಾಂಗ್ರೆಸ್) | 1,16,560 |
| 2019 | ಪಿ.ಸಿ.ಗದ್ದಿಗೌಡರ(ಬಿಜೆಪಿ) | ವೀಣಾ ಕಾಶಪ್ಪನವರ (ಕಾಂಗ್ರೆಸ್) | 1,68,187 |

**ಸಂಯುಕ್ತಾ ಪಾಟೀಲ ಪಾಸಿಟಿವ್**

ಪಾಸಿಟಿವ್
- ಸಚಿವರ ಮಗಳು ಎಂಬ ಕಾರಣಕ್ಕೆ ಒಂದಾಗಿರುವ ಮುಖಂಡರ ಬಲ
- ತಂದೆ ಶಿವಾನಂದ ಪಾಟೀಲರಿಗೆ 2019ರ ಲೋಕಸಭೆ ಚುನಾವಣೆಯ ಅನುಭವ
- ಕಾಂಗ್ರೆಸ್‌ನ ಪಂಚ ಗ್ಯಾರಂಟಿಗಳು ಜನರಿಗೆ ತಲುಪಿರುವುದು
- ಸಾಂಪ್ರದಾಯಿಕ ಜತೆಗೆ ಗ್ಯಾರಂಟಿ ಲಾಭ ಪಡೆದವರ ಮತ ಬಂದರೆ ಗೆಲುವು ಸುಲಭ

ನೆಗೆಟಿವ್:
- ಹೊರಗಿನ ಜಿಲ್ಲೆಯವರು
- ಸ್ಥಳೀಯ ನಾಯಕರ ಹೆಸರೇ ಗೊತ್ತಿಲ್ಲ
- ಜಿಲ್ಲೆಯ ಸಮಸ್ಯೆಗಳ ಬಗ್ಗೆ ಅರಿತಿಲ್ಲ
- ವಿವಿಧ ಪಕ್ಷದವರನ್ನು ಕಾಂಗ್ರೆಸ್ ಸೇರಿಸಿಕೊಂಡಿದ್ದರಿಂದ ಒಳೇಟಿನ ಭಯ

**ಪಿ.ಸಿ.ಗದ್ದಿಗೌಡರ**

ಪಾಸಿಟಿವ್
- ಸರಳ-ಸಜ್ಜನ ವ್ಯಕ್ತಿತ್ವದ ರಾಜಕಾರಣಿ
- ಎಲ್ಲ ಪಕ್ಷದವರೊಂದಿಗೆ ಉತ್ತಮ ಒಡನಾಟ
- ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಹೋಗುವ ಗುಣ
- ಸಾರ್ವಜನಿಕರಿಗೆ ಸರಳವಾಗಿ ಲಭ್ಯ

ನೆಗೆಟಿವ್
- 20 ವರ್ಷ ಅಧಿಕಾರದಲ್ಲಿದ್ದರೂ ಜಿಲ್ಲೆಯಲ್ಲಿ ಅಭಿವೃದ್ಧಿ ಮಾಡಿಲ್ಲ ಎಂಬ ಆರೋಪ
- ಸರಕಾರದ ಯೋಜನೆ ತರಲಷ್ಟೇ ಸೀಮಿತ
- 4 ಬಾರಿ ಗೆದ್ದರೂ ಕುಡಚಿ-ಬಾಗಲಕೋಟೆ ರೈಲು ಮಾರ್ಗ ಪೂರ್ಣಗೊಂಡಿಲ್ಲ
- ಸಂಸತ್ತಿನಲ್ಲಿ ಸ್ಥಳೀಯ ಸಮಸ್ಯೆಗಳ ಬಗ್ಗೆ ಧ್ವನಿ ಎತ್ತಿಲ್ಲ

**ಅಭಿಷೇಕ ಪಾಟೀಲ** ಬಾಗಲಕೋಟೆ

ಬಾಗಲಕೋಟೆ ಲೋಕಸಭೆ ಕ್ಷೇತ್ರದಿಂದ ಬಿಜೆಪಿಯಿಂದ ಸತತ ನಾಲ್ಕು ಬಾರಿ ಆಯ್ಕೆಯಾಗಿರುವ ಪಿ.ಸಿ.ಗದ್ದಿಗೌಡರ ಅವರನ್ನು ಮಣಿಸಲು ಈ ಬಾರಿ ಕಾಂಗ್ರೆಸ್‌ನಿಂದ ಸಚಿವ ಶಿವಾನಂದ ಪಾಟೀಲ ಅವರ ಪುತ್ರಿ ಸಂಯುಕ್ತಾ ಅವರು ಕಣಕ್ಕಿಳಿದಿದ್ದು, ಗದ್ದಿಗೌಡರ ಅವರ 5ನೇ ಬಾರಿ ಗೆಲುವಿಗೆ ಬ್ರೇಕ್ ಹಾಕಲು ರಣತಂತ್ರ ರೂಪಿಸುತ್ತಿದ್ದಾರೆ.

ಕಾಂಗ್ರೆಸ್‌ನಿಂದ ಪ್ರಬಲ ಆಕಾಂಕ್ಷಿಯಾಗಿದ್ದ ಮಾಜಿ ಜಿಲ್ಲಾ ಪಂಚಾಯಿತಿ ಅಧ್ಯಕ್ಷೆ ವೀಣಾ ಕಾಶಪ್ಪನವರ ಅವರಿಗೆ ಟಿಕೆಟ್ ತಪ್ಪಿದ ಹಿನ್ನೆಲೆಯಲ್ಲಿ ಅನೇಕ ನಾಯಕರು ಬಹಿರಂಗವಾಗಿಯೇ 'ಜಿಲ್ಲೆಯಲ್ಲಿ ನಾಯಕರಿರಲಿಲ್ಲವೇ' ಎಂಬ ಮಾತುಗಳನ್ನಾಡಿದ್ದರು. ಹೊರಗಿನವರು ಎಂಬ ಹಣೆಪಟ್ಟಿಯೊಂದಿಗೆ ಸಂಯುಕ್ತಾ ಪಾಟೀಲ ಅವರು ಪ್ರಚಾರ ಪ್ರಾರಂಭಿಸಿದ್ದು, ಸದ್ಯ ಜಿಲ್ಲೆಯ ಎಲ್ಲ ನಾಯಕರು ಸೇರಿ ಕಾಂಗ್ರೆಸ್ ಚುನಾವಣೆ ಮಾಡುತ್ತಿದ್ದಾರೆ.

ಈ ಹಿಂದಿನ 4 ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಸತತ ಸೋಲನುಭವಿಸಿದ್ದರು. ಅದರಿಂದ ಕಂಗೆಟ್ಟಿದ್ದ ಕಾಂಗ್ರೆಸ್‌ಗೆ ಸಚಿವರ ಮಗಳಿಗೆ ಟಿಕೆಟ್ ನೀಡಿರುವುದು ಹೊಸ ಹುಮಸ್ಸು ಬಂದಿದೆ. ಹಿಂದೆಂದಿಗಿಂತಲೂ ಈ ಬಾರಿ ಒಗ್ಗಟ್ಟಾಗಿರುವ ಕಾಂಗ್ರೆಸ್ ನಾಯಕರು ಶತಾಯಗತಾಯ ಗದ್ದಿಗೌಡರ ಅವರನ್ನು ಮಣಿಸಲು ತಂತ್ರ ರೂಪಿಸುತ್ತಿದ್ದಾರೆ.

ಕಾಂಗ್ರೆಸ್ ರಣತಂತ್ರದ ನಡುವೆ ಬಿಜೆಪಿಯ ಸೌಮ್ಯ ಸ್ವಭಾವದ ಗದ್ದಿಗೌಡರ ಅವರು, ಈ ಬಾರಿ ಸ್ವಲ್ಪ ಖಡಕ್ಕಾಗಿ ಮಾತನಾಡುವ ಮೂಲಕವೇ ಪ್ರಚಾರ ಮಾಡುತ್ತಿದ್ದಾರೆ. ಪ್ರತಿ ಬಾರಿಯಷ್ಟೇ ಈ ಬಾರಿ ಚುನಾವಣೆ ಸುಲಭವಲ್ಲ ಎಂಬ ಮಾಹಿತಿ ಬಿಜೆಪಿಗೂ ಇದ್ದ ಹಿನ್ನೆಲೆಯಲ್ಲಿ ಬೂತ್ ಮಟ್ಟದಿಂದಲೇ ಪಕ್ಷ ಸಂಘಟಿಸುತ್ತಿದೆ. ಇದರ ಜತೆಗೆ ಏ.29ರಂದು ಬಾಗಲಕೋಟೆಗೆ ಪ್ರಧಾನಿ ಮೋದಿ ಆಗಮಿಸಿ ಪ್ರಚಾರ ನಡೆಸಿದ ಬಳಿಕ ಜಿಲ್ಲೆಯ ಲಕ್ಷಾಂತರ ವೋಟುಗಳು ಮತ್ತೊಮ್ಮೆ ಬಿಜೆಪಿಗೆ ಬರಲಿದೆ ಎಂಬ ಲೆಕ್ಕಾಚಾರದಲ್ಲಿದ್ದಾರೆ ಬಿಜೆಪಿ ಪಾಳಯದ ಮುಖಂಡರು.

**ಒಟ್ಟು ಮತದಾರರು**

ಪುರುಷ-8,95,432
ಮಹಿಳೆಯರು-9,10,650
ತೃತೀಯ ಲಿಂಗಿಗಳು&101
ಒಟ್ಟು-18,06,183

ಕಲಬುರಗಿಯಲ್ಲಿ ಡಾ.ಉಮೇಶ್ ಜಾಧವ ಪರ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ ರೋಡ್ ಶೋ

# ಇಂಡಿ ಮೈತ್ರಿಕೂಟ ಭ್ರಷ್ಟಾಚಾರಿಗಳಿಂದ ಭರ್ತಿ

**ಕಲಬುರಗಿ:** ಕಾಂಗ್ರೆಸ್ ನೇತೃತ್ವದಲ್ಲಿ ರಚನೆಗೊಂಡಿರುವ ಇಂಡಿ ಮೈತ್ರಿಕೂಟದಲ್ಲಿನ ಎಲ್ಲಾ ಪಕ್ಷಗಳು ಭ್ರಷ್ಟಾಚಾರದಿಂದ ತುಂಬಿರುವ ಪಕ್ಷಗಳಾಗಿವೆ ಎಂದು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜಗತ್ ಪ್ರಕಾಶ್ ನಡ್ಡಾ ಹೇಳಿದ್ದಾರೆ.

ನಗರದ ಸೂಪರ್ ಮಾರ್ಕೆಟ್,ನಲ್ಲಿ ಅದ್ದೂರಿ ರೋಡ್ ಶೋ ಬಳಿಕ ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಿದ ಅವರು, ಇಂಡಿಯಾ ಒಕ್ಕೂಟ ಅದೊಂದು ಘಮಂಡಿ ಒಕ್ಕೂಟವಾಗಿದೆ. ಮೈತ್ರಿಕೂಟದೊಳಗಿನ ಎಲ್ಲಾ ಪಕ್ಷಗಳ ನಾಯಕರು ಒಂದಿಲ್ಲೊಂದು ಭ್ರಷ್ಟಾಚಾರ ಮಾಡಿ ಜೈಲಿಗೆ ಹೋಗಿ ಬಂದವರಾಗಿದ್ದಾರೆ ಲೇವಡಿ ಮಾಡಿದರು.

ಕಳೆದ ಹತ್ತು ವರ್ಷಗಳ ಆಡಳಿತದ ಅವಧಿಯಲ್ಲಿ ನಾವು ದೇಶದಲ್ಲಿನ ಭ್ರಷ್ಟಾಚಾರ ನಿರ್ಮೂಲನೆ ಮಾಡುತ್ತಿದ್ದರೆ,ಇವರು ಭ್ರಷ್ಟಾಚಾರವನ್ನು ಎಸಗುತ್ತಿದ್ದಾರೆ. ಭ್ರಷ್ಟಾಚಾರದ ತನಿಖೆಗೆ ಆದೇಶ ಮಾಡಿದರೆ, ಅದನ್ನು ವಿರೋಧಿಸಲು ಪ್ರಯತ್ನ ಮಾಡುತ್ತಿದ್ದಾರೆ. ಕಾಂಗ್ರೆಸ್,ನ ಕಳೆದ 50 ವರ್ಷಗಳ ಆಡಳಿತದ ಅವಧಿಯಲ್ಲಿ ಕಲ್ಲಿದ್ದಲು ಹಗರಣ, 2ಜಿ ಹಗರಣ, ಕಾಮನ್‌ವೆಲ್ತ್ ಹಗರಣ, ಹೆಲಿಕಾಪ್ಟರ್ ಹಗರಣ ಸೇರಿದಂತೆ ಹಲವು ಹಗರಣ ಮಾಡಿ, ಕಾಂಗ್ರೆಸ್ ಹಲವು ನಾಯಕರು ಇಂದು ಬೇಲ್ ಮೇಲೆ ತಿರುಗಾಟ ನಡೆಸಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

**ಬೃಹತ್ ರೋಡ್ ಶೋ:**

ಇದಕ್ಕೂ ಮುನ್ನ ನಗರದ ಸರಾಫ್ ಬಜಾರ್,ನ ಗಣೇಶ ಮಂದಿರದಿಂದ ಅದ್ದೂರಿ ರೋಡ್ ಶೋ ನಡೆಸಿ, ಸರಾಫ್ ಬಜಾರ್, ಬಾಂಡೆ ಬಜಾರ್, ಸೂಪರ್ ಮಾರ್ಕೆಟ್ ನ ಪ್ರಮುಖ ಬೀದಿಗಳಲ್ಲಿ ಸಾಗಿ ಬಿಜೆಪಿ ಅಭ್ಯರ್ಥಿ ಡಾ.ಉಮೇಶ್ ಜಾಧವ್ ಅವರ ಪರವಾಗಿ ಮತಯಾಚನೆ ಮಾಡಿದರು.



ಕಲಬುರಗಿಯಲ್ಲಿ ಡಾ. ಉಮೇಶ್ ಜಾಧವ ಪರ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ ರೋಡ್ ಶೋ ನಡೆಸಿದರು.

> ದೇಶದಲ್ಲಿ ಭ್ರಷ್ಟಾಚಾರ ನಿರ್ಮೂಲನೆ ಮಾಡಲು, ದೇಶವನ್ನು ಸುಭದ್ರವಾಗಿ ಮುನ್ನಡೆಸಲು ನರೇಂದ್ರ ಮೋದಿ ಅವರನ್ನು ಗೆಲ್ಲಿಸಬೇಕು ಹೀಗಾಗಿ ತಾವೆಲ್ಲರೂ ಬರುವ ಮೇ 7ರಂದು ನಮ್ಮ ಉಮೇಶ್ ಜಾಧವ್ ಅವರನ್ನು ಗೆಲ್ಲಿಸುವ ಮೂಲಕ ಅವರನ್ನು ದೆಹಲಿಗೆ ಕಳಿಸಬೇಕು.
> -ಜೆಪಿ ನಡ್ಡಾ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ

**ಖರ್ಗೆ ವಿರುದ್ಧ ಕಿಡಿ**

ಹಿಂದೆ ಕಾಂಗ್ರೆಸ್ ಅವಧಿಯಲ್ಲಿ ಮಜಬೂರ್ ಸರಕಾರ ನೋಡಿದ್ದಿರಾ. ಕಳೆದ ಹತ್ತು ವರ್ಷಗಳಿಂದ ಮಜಬೂತಾದ ಸರಕಾರವನ್ನು ನೋಡುತ್ತಿದ್ದೀರಾ. ಮುಂದಿನ ದಿನಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರನ್ನು 3ನೇ ಬಾರಿಗೆ ಪ್ರಧಾನಿ ಮಾಡಿದರೆ, ಭಾರತವನ್ನು ಆರ್ಥಿಕವಾಗಿ 3ನೇ ಸ್ಥಾನದಲ್ಲಿ ತರುವ ಸಂಕಲ್ಪ ನಮ್ಮದಾಗಿದೆ. ಹೀಗಾಗಿ 2024ರ ಲೋಕಸಭೆ ಚುನಾವಣೆಯಲ್ಲಿ ನರೇಂದ್ರ ಮೋದಿ ಅವರನ್ನು ಮೂರನೇ ಬಾರಿಗೆ ಪ್ರಧಾನಿ ಮಾಡಲು ಕಲಬುರಗಿ ಬಿಜೆಪಿ ಅಭ್ಯರ್ಥಿಯನ್ನು ಗೆಲ್ಲಿಸುವ ಮೂಲಕ, ಇಲ್ಲಿಯ ಹಿರಿಯ ನಾಯಕರನ್ನು ಮನೆಯಲ್ಲಿ ವಿಶ್ರಾಂತಿ ಮಾಡುವಂತೆ ತಾವೆಲ್ಲರೂ ಸಜ್ಜಾಗಿ ಎಂದು ಜೆಪಿ ನಡ್ಡಾ ಪರೋಕ್ಷವಾಗಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ತಿವಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಬಿ.ಜಿ.ಪಾಟೀಲ್, ಶಶೀಲ್ ನಮೋಶಿ, ನಗರಾಧ್ಯಕ್ಷ ಚಂದು ಪಾಟೀಲ್, ಜಿಲ್ಲಾಧ್ಯಕ್ಷ ಶಿವರಾಜ್ ಪಾಟೀಲ್ ರದ್ದೇವಾಡಗಿ, ಮಾಜಿ ಶಾಸಕ ದತ್ತಾತ್ರೇಯ ಪಾಟೀಲ್ ರೇವೂರ್, ರಾಜಕುಮಾರ್ ಪಾಟೀಲ್ ತೇಲ್ಕೂರ್ ಉಪಸ್ಥಿತರಿದ್ದರು.

ರಾಜ್ಯದಲ್ಲಿ ಒಬಿಸಿ ಎಸ್ಸಿ, ಎಸ್ಟಿ ಮೀಸಲು ಕಬಳಿಸಿ ಮುಸ್ಲಿಂರಿಗೆ ಕೊಡುತ್ತಿರುವುದು ಸತ್ಯ: ಪ್ರಲ್ಹಾದ್ ಜೋಶಿ

# ಮುಖ್ಯಮಂತ್ರಿ ಸಿದ್ದರಾಮಯ್ಯ ಸುಳ್ಳಿನ ಸರದಾರ

**ಹುಬ್ಬಳ್ಳಿ:** ರಾಜ್ಯದಲ್ಲಿ ಒಬಿಸಿ ಎಸ್ಸಿ ಎಸ್ಟಿ ಮೀಸಲು ಕಬಳಿಸಿ ಮುಸ್ಲಿಂರಿಗೆ ಕೊಡುತ್ತಿರುವುದು ಸತ್ಯ. ನಮ್ಮ ಬಳಿ ದಾಖಲೆ ಇದೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿ, ಸಿಎಂ ಅಧಿಕಾರಕ್ಕೆ ಬರುತ್ತಲೇ ನ್ಯಾಶನಲ್ ಒಬಿಸಿ ಕಮಿಷನ್ ಗೆ ಪತ್ರ ಬರೆದಿದ್ದಾರೆ. ಒಬಿಸಿ ಕಮಿಷರ್ ಸಿಎಂಗೆ ನೋಟಿಸ್ ಸಹ ಕಳಿಸಿದ್ದಾರೆ ಎಂದು ಸ್ಪಷ್ಟಪಡಿಸಿದರು.

ಈಗ ಚುನಾವಣೆ ಕಾರಣದಿಂದ, ದಲಿತ ಒಬಿಸಿ ಮೀಸಲು ಕಬಳಿಸುತ್ತಿಲ್ಲ. ಮುಸ್ಲಿಂರಿಗೆ ನೀಡುತ್ತಿಲ್ಲ ಎಂದು ಹಸಿ ಸುಳ್ಳು ಹೇಳುತ್ತಿದ್ದಾರೆ.

ಸಿಎಂ ಸಿದ್ದರಾಮಯ್ಯ ಸುಳ್ಳಿನ ಸರದಾರರು. ನ್ಯಾಶನಲ್ ಒಬಿಸಿ ಕಮಿಷನ್ ಗೆ ಬರೆದ ಪತ್ರದಲ್ಲಿ ಸಿಎಂ ಸ್ಪಷ್ಟವಾಗಿ ಉಲ್ಲೇಖಿಸಿದ್ದಾರೆ. ಸಿಎಂ ಹಾಜರಾಗುವಂತೆ ಒಬಿಸಿ ಕಮಿಷನರ್ ನೀಡಿದ ನೋಟೀಸ್ ನನ್ನ ಬಳಿ ಇದೆ . ಒಬಿಸಿ ಕಮಿಷನ್ ಗೆ ಸಿಎಂ ಪತ್ರ ಬರೆದಿಲ್ಲ ಎಂದಾದರೆ ಹಂಸರಾಜ್ ಅವರು ನೀಡಿರುವ ನೋಟೀಸ್ ಗೆ ಉತ್ತರ ಕೊಡಲಿ. ಎಸ್ಸಿ, ಎಸ್ಟಿ ಮೀಸಲಾತಿಯನ್ನು ಕಬಳಿಸಿ ತಮ್ಮ ವೋಟ್ ಬ್ಯಾಂಕ್ ಮುಸ್ಲಿಂರಿಗೆ ಕೊಡುತ್ತಿರುವುದು ಅತ್ಯಂತ ಅಪಾಯಕಾರಿ ಬೆಳವಣಿಗೆ ಎಂದು ಸಚಿವ ಪ್ರಲ್ಹಾದ ಜೋಶಿ ಎಚ್ಚರಿಸಿದರು.



> ಧರ್ಮಾಧಾರಿತ ಮೀಸಲು ನೀಡಲು ಸಂವಿಧಾನದಲ್ಲಿ ಅವಕಾಶವಿಲ್ಲ. ಸುಪ್ರೀಂ ಕೋರ್ಟ್ ಸಹ ಇದನ್ನು ಸ್ಪಷ್ಟಪಡಿಸಿದೆ. ಈ ವಿಷಯದಲ್ಲಿ ಸಿಎಂ ಜನರ ದಾರಿ ತಪ್ಪಿಸುತ್ತಿದ್ದಾರೆ. ಬಿಜೆಪಿ ಸರಕಾರ ಇದ್ದಾಗ ಒಕ್ಕಲಿಗರಿಗೆ ಮತ್ತು ಲಿಂಗಾಯತರಿಗೆ 2 ಪರ್ಸೆಂಟ್ ಮೀಸಲು ಕಲ್ಪಿಸಲು ಇವರು ವಿರೋಧಿಸಿದ್ದರು.
> - ಪ್ರಲ್ಹಾದ ಜೋಶಿ, ಕೇಂದ್ರ ಸಚಿವ

ಹಿಂದುಳಿದ ವರ್ಗಗಳ ಆಯೋಗದ ವರದಿ ಸಮೀಕ್ಷೆ ಮಾಡುವುದು ಸುಳ್ಳು ಭರವಸೆ

# ಬಿಜೆಪಿಗೆ ಮತ, ಕಾಂಗ್ರೆಸ್‌ಗೆ ಚೊಂಬು



ಹಾನಗಲ್ ವಿಧಾನಸಭಾ ಕ್ಷೇತ್ರದ ಮಾರನಬೀಡ್, ಕಂಚಿನೆಗಳೂರು, ಮಲಗುಂದ ಗ್ರಾಮಗಳಲ್ಲಿ ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಚುನಾವಣಾ ಪ್ರಚಾರ ನಡೆಸಿದರು.

**ಹಾವೇರಿ:** ಚುನಾವಣಾ ರಾಜಕಾರಣಕ್ಕಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹಿಂದುಳಿದ ವರ್ಗಗಳ ಆಯೋಗದ ವರದಿ ಪಡೆದು ಇಟ್ಟುಕೊಂಡಿದ್ದಾರೆ. ರಾಜ್ಯ ಸರಕಾರ ಬಳಿ ಇರುವ ವರದಿಯನ್ನೇ ಬಿಡುಗಡೆ ಮಾಡಿಸಲಾಗದ ರಾಹುಲ್ ಗಾಂಧಿ, ದೇಶಾದ್ಯಂತ ಹಿಂದುಳಿದ ವರ್ಗಗಳ ಸಮೀಕ್ಷೆ ಮಾಡುವುದಾಗಿ ಜನರಿಗೆ ಸುಳ್ಳು ಹೇಳುತ್ತಿದ್ದಾರೆ ಎಂದು ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ.

ಅವರು ಹಾನಗಲ್ ವಿಧಾನಸಭಾ ಕ್ಷೇತ್ರದ ಮಾರನಬೀಡ್, ಕಂಚಿನೆಗಳೂರು, ಮಲಗುಂದ ಗ್ರಾಮಗಳಲ್ಲಿ ಚುನಾವಣಾ ಪ್ರಚಾರ ನಡೆಸಿ ಮಾತನಾಡಿ, ಈ ರಾಜ್ಯ ಸರಕಾರದವರು ದ್ವೇಷದ ರಾಜಕಾರಣ ಮಾಡುತ್ತಿದ್ದಾರೆ. ಸಮಾಜಗಳ ನಡುವೆ ಸಂಘರ್ಷ ಹುಟ್ಟಿಸುತ್ತಿದ್ದಾರೆ. ಸಿಎಂ ಸಿದ್ದರಾಮಯ್ಯ ಅವರು ಹಿಂದುಳಿದ ವರ್ಗದ ಆಯೋಗದ ವರದಿ ಪಡೆದು ಇಟ್ಟುಕೊಂಡಿದ್ದಾರೆ. ರಾಹುಲ್ ಗಾಂಧಿಯವರು ದೇಶಾದ್ಯಂತ ಹಿಂದುಳಿದ ವರ್ಗಗಳ ಸಮೀಕ್ಷೆ ಮಾಡುವುದಾಗಿ ಹೇಳುತ್ತಾರೆ. ಆದರೆ, ರಾಜ್ಯದಲ್ಲಿ ವರದಿ ಪಡೆದಿದ್ದರೂ ಅದನ್ನು ಬಿಡುಗಡೆ ಮಾಡುತ್ತಿಲ್ಲ. ವರದಿ ಇಟ್ಟುಕೊಂಡು ರಾಜಕಾರಣ ಮಾಡುತ್ತಿದ್ದಾರೆ ಎಂದು ಹೇಳಿದರು.

ಪ್ರಚಾರ ಸಂದರ್ಭದಲ್ಲಿ ಸಂಸದ ಶಿವಕುಮಾರ ಉದಾಸಿ, ಮಾಜಿ ಸಚಿವ ಮನೋಹರ ತಹಸೀಲ್ದಾರ್, ಮಾಜಿ ಶಾಸಕ ಶಿವರಾಜ ಸಜ್ಜನ ಹಾಜರಿದ್ದರು.

> ನಾವು ಹಾನಗಲ್ ತಾಲೂಕಿನಲ್ಲಿ ತಿಳವಳ್ಳಿ, ಮಾರನಗುಡಿ ಏತ ನಿರಾವರಿ ಯೋಜನೆ ಜಾರಿ ಮಾಡಿದ್ದೇವೆ. ಮಾಳಗಿ ಡ್ಯಾಮ್ 16 ಅಡಿ ಇದ್ದಾಗ ನೀರು ಬಿಟ್ಟಿದ್ದೇವು. ಇವರು 20 ಅಡಿ ಇದ್ದರೂ ನೀರು ಬಿಡುತ್ತಿಲ್ಲ. ಇವರಿಗೆ ರೈತರ ಬಗ್ಗೆ ಕಾಳಜಿಯಿಲ್ಲ. ಈ ಸರಕಾರ ರೈತರು, ಮಹಿಳೆಯರು, ದಲಿತರಿಗೆ ಚೆಂಬು ಕೊಟ್ಟಿದ್ದೆ, ಮೇ 7 ರಂದು ಬಿಜೆಪಿಗೆ ಮತ ಹಾಕುವ ಮೂಲಕ ಕಾಂಗ್ರೆಸ್ ಗೆ ಚೆಂಬು ಕೊಡಬೇಕು.
> - ಬಸವರಾಜ ಬೊಮ್ಮಾಯಿ, ಮಾಜಿ ಸಿಎಂ

**ರಾಜ್ಯದಲ್ಲಿ ಮಹಿಳೆಯರು ಸುರಕ್ಷಿತವಾಗಿಲ್ಲ**


ಈ ರಾಜ್ಯದಲ್ಲಿ ಮಹಿಳೆಯರು ಸುರಕ್ಷಿತವಾಗಿಲ್ಲ. ಅಲ್ಪಸಂಖ್ಯಾತ ಮಹಿಳೆಯರು, ದಲಿತ ಮಹಿಳೆಯರು ಸುರಕ್ಷಿತವಾಗಿ ಉಳಿದಿಲ್ಲ. ಹುಬ್ಬಳ್ಳಿ ಕಾಲೇಜು ಯುವತಿ ನೇಹಾ ಕೊಲೆ ವಯಕ್ತಿಕ ವಿಚಾರ ಎಂದು ಸಿಎಂ ಹೇಳುತ್ತಿದ್ದಾರೆ. ನಮ್ಮ ಹೆಣ್ಣು ಮಕ್ಕಳ ಮೇಲೆ ಅತ್ಯಾಚಾರ ಆದರೂ ಕಾಂಗ್ರೆಸ್ ನವರಿಗೆ ಅಲ್ಪಸಂಖ್ಯಾತರ ಮತ ಬೇಕು. ಅದಕ್ಕಾಗಿ ಅವರಿಗೆ ರಕ್ಷಣೆ ಕೊಡುತ್ತಿದ್ದಾರೆ. ಅತ್ಯಾಚಾರಿಗಳು, ಕೊಲೆಗಡುಕರಿಗೆ ಈ ಸರಕಾರದಲ್ಲಿ ರಾಜ ಮರ್ಯಾದೆ ದೊರೆಯುತ್ತಿದೆ ಎಂದು ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಹೇಳಿದರು.



ನಟಿ ರಾಗಿಣಿ ದ್ವಿವೇದಿ ಅವರು ತಮ್ಮ ಹಕ್ಕು ಚಲಾಯಿಸಿದರು.



ನಟ ಅನಿರುದ್ಧ ಅವರು ಮತ ಚಲಾಯಿಸಿದರು.



ನಟಿ ಭಾರತಿ ವಿಷ್ಣುವರ್ಧನ್ ಅವರು ತಮ್ಮ ಹಕ್ಕು ಚಲಾಯಿಸಿದರು.



ನಟ ವಶಿಷ್ಠ ಸಿಂಹ, ನಟಿ ಹರಿಪ್ರಿಯಾ ಅವರು ತಮ್ಮ ಹಕ್ಕು ಚಲಾಯಿಸಿದರು.



ನಟ ಉಪೇಂದ್ರ ಅವರು ಮತ ಚಲಾಯಿಸಿದರು.



ನಟ ಕೋಮಲ್ ಅವರು ಮತ ಚಲಾಯಿಸಿದರು.



ನಟಿ ಚೈತ್ರಾ ಆಚಾರ್ ಅವರು ಮತ ಚಲಾಯಿಸಿದರು.